# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮುಖ್ಯಮಂತ್ರಿ ಗ್ರಾಮವಿಕಾಸ ಯೋಜನೆಯಡಿ ಆಯ್ಕೆಯಾದ ಗ್ರಾಮಗಳನ್ನು ಅನುಮೋದಿಸುವ ಬಗ್ಗೆ

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:09:ಗ್ರಾವಿಯೋ:2017 ದಿ:20.06.2017.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾವೇರಿ ರವರ ಪತ್ರ ಸಂಖ್ಯೆ:ಹಾಜಿಪಂ:ಯೋ:ಮು.ಮಂ.ಗ್ರಾ.ವಿ.ಯೋ:ವಿವ-26-2017-18, ದಿನಾಂಕ: 17.07.2017.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ತುಮಕೂರು ಇವರ ಪತ್ರ ಸಂಖ್ಯೆ: ತುಜಿಪ:ಅಭಿವೃದ್ಧಿ:ಮು.ಮಂ.ಗ್ರಾವಿಯೋ:ವಿವ:19/2017-18, ದಿ:14.07.2017.

**ಪ್ರಸ್ತಾವನೆ:**

"ಮುಖ್ಯಮಂತ್ರಿ ಗ್ರಾಮವಿಕಾಸ ಯೋಜನೆ" ಯಡಿ ಆಯ್ಕೆಯಾಗುವ ಪ್ರತಿ ಗ್ರಾಮಕ್ಕೆ ಗರಿಷ್ಠ ರೂ.1.00ಕೋಟಿ ಅನುದಾನದಲ್ಲಿ ಗರಿಷ್ಟ 1000 ಗ್ರಾಮಗಳನ್ನು ಆಯ್ಕೆ ಮಾಡಿ 2017-18ನೇ ಸಾಲಿನಿಂದ ರಾಜ್ಯದ ಎಲ್ಲಾ ಜಿಲ್ಲೆಗಳ ಗ್ರಾಮೀಣ ವಿಧಾನಸಭಾ ಮತಕ್ಷೇತ್ರಗಳ ವ್ಯಾಪ್ತಿಯಲ್ಲಿ ಅಭಿವೃದ್ಧಿ ಪಡಿಸಲು ಉದ್ದೇಶಿಸಲಾಗಿದೆ. ಸದರಿ ಯೋಜನೆಯನ್ನು ಅನುಷ್ಠಾನ ಮಾಡುವ ಬಗ್ಗೆ ಗ್ರಾಮಗಳ ಆಯ್ಕೆ ಅನುದಾನ ಹಂಚಿಕೆ ಇತ್ಯಾದಿ ವಿಷಯಗಳ ಬಗ್ಗೆ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ವಿವರವಾಗಿ ಮೇಲೆ ಓದಲಾದ (1) ರ ಸರ್ಕಾರಿ ಆದೇಶವನ್ನು ಹೊರಡಿಸಲಾಗಿದೆ.

ಅದರಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾವೇರಿ ಮತ್ತು ತುಮಕೂರು ಇವರುಗಳು ಓದಲಾದ (2) & (3) ರಲ್ಲಿ ಅನುಮೋದನೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಸದರಿ ಪ್ರಸ್ತಾವನೆಗಳನ್ನು ಮಾರ್ಗಸೂಚಿಗಳನ್ವಯ ಪರಿಶೀಲಿಸಿದ್ದು ಅನುಬಂಧದಲ್ಲಿರುವ ಜಿಲ್ಲೆಗಳ ಗ್ರಾಮೀಣ ವಿಧಾನ ಸಭಾ ಕ್ಷೇತ್ರಗಳಲ್ಲಿ ಆಯ್ಕೆಯಾದ ಗ್ರಾಮಗಳಲ್ಲಿ ಮುಖ್ಯ ಮಂತ್ರಿ ಗ್ರಾಮ ವಿಕಾಸ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರವು ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ: 21 :ಗ್ರಾವಿಯೋ:2017, ಬೆಂಗಳೂರು,**
**ದಿನಾಂಕ: 31.08.2017.**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಹಾವೇರಿ ಮತ್ತು ತುಮಕೂರು ಜಿಲ್ಲೆಗಳ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಆಯ್ಕೆಯಾದ ಗ್ರಾಮಗಳಿಗೆ ಅನುಬಂಧದಲ್ಲಿರುವಂತೆ ಮುಖ್ಯ ಮಂತ್ರಿ ಗ್ರಾಮ ವಿಕಾಸ ಯೋಜನೆಯನ್ನು ಅನುಷ್ಠಾನಗೊಳಿಸಲು ಅನುಮೋದನೆ ನೀಡಲಾಗಿದೆ. ಯೋಜನೆಯನ್ನು ಅನುಷ್ಠಾನಗೊಳಿಸುವಾಗ ಈ ಕೆಳಕಂಡ ನಿಯಮಗಳನ್ನು ಪಾಲಿಸಲು ಆದೇಶಿಸಿದೆ.

1. ಅನುಬಂಧದಲ್ಲಿ ವಿವರಿಸಿರುವಂತೆ ಗ್ರಾಮಗಳಿಗೆ ನಿಗದಿಪಡಿಸಿರುವ ಅನುದಾನದ ಮಿತಿಯೊಳಗೆ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು.
2. ಗ್ರಾಮ ಪಂಚಾಯಿತಿಗಳು ವಾರ್ಡ್ ಸಭೆ / ಗ್ರಾಮ ಸಭೆಗಳನ್ನು ನಡೆಸಿ ಗ್ರಾಮಾಭಿವೃದ್ಧಿ ಯೋಜನೆಯನ್ನು ಮಾರ್ಗಸೂಚಿಯಲ್ಲಿರುವಂತೆ ತಯಾರಿಸಿ ಗ್ರಾಮ ಪಂಚಾಯಿತಿಯ ಅನುಮೋದನೆಯನ್ನು ಪಡೆಯುವುದು. ಗ್ರಾಮ ಪಂಚಾಯಿತಿಯು ಕ್ರಿಯಾ ಯೋಜನೆಯನ್ನು ಯಾವುದೇ ಕಾರಣಕ್ಕೂ ವಿಳಂಬ ಮಾಡದೆ ಅನುಮೋದನೆ ನೀಡುವುದು. ಅನುಮೋದನೆಯಾದ ಗ್ರಾಮಾಭಿವೃದ್ಧಿ ಯೋಜನೆಯನ್ನು ತಾಲ್ಲೂಕು, ಜಿಲ್ಲಾ ಪಂಚಾಯಿತಿ ಹಾಗೂ ಸರ್ಕಾರಕ್ಕೆ ಕಡ್ಡಾಯವಾಗಿ ಸಲ್ಲಿಸುವುದು.
3. ಗ್ರಾಮ ಪಂಚಾಯತಿಗಳು ಎಸ್‌ಸಿಪಿ / ಟಿಎಸ್‌ಪಿ ಯೋಜನೆಯಡಿ ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡದ ಕಾಲೋನಿಗಳ ಅಭಿವೃದ್ಧಿಗೆ ಕೈಗೊಳ್ಳುವ ಕ್ರಿಯಾ / ಗ್ರಾಮಾಭಿವೃದ್ಧಿ ಯೋಜನೆಯನ್ನು ಪ್ರತ್ಯೇಕವಾಗಿ ಕಡ್ಡಾಯವಾಗಿ ತಯಾರಿಸುವುದು.

4. ಎಸ್‌ಸಿಪಿ / ಟಿಎಸ್‌ಪಿ ಯೋಜನೆಯಡಿ [illegible] ಯೋಜನೆಯನ್ನು [illegible] ಒಟ್ಟು ಅನುದಾನದ ಪೈಕಿ ಕನಿಷ್ಠ ಶೇ.17.15% ರಷ್ಟು ಅನುದಾನವನ್ನು ಪರಿಶಿಷ್ಟ ಜಾತಿ ವರ್ಗದವರಿಗೆ ಮತ್ತು ಕನಿಷ್ಠ ಶೇ.6.95% ರಷ್ಟು ಅನುದಾನವನ್ನು ಪರಿಶಿಷ್ಟ ಪಂಗಡದವರಿಗೆ ಮೀಸಲಿಡುವುದು.

5. ಮುಖ್ಯ ಮಂತ್ರಿ ಗ್ರಾಮ ವಿಕಾಸ ಯೋಜನೆಯಡಿ ವಿಧಾನ ಸಭಾ ಸದಸ್ಯರು ಆಯ್ಕೆ ಮಾಡಿದ 4 ಗ್ರಾಮಗಳ ಪೈಕಿ ಹೆಚ್ಚು ಎಸ್‌ಸಿ, ಎಸ್‌ಟಿ ಜನಸಂಖ್ಯೆ-ಹೊಂದಿರುವ 2 ಅಥವಾ 4 ಗ್ರಾಮಗಳ ಬದಲಿಗೆ ಒಂದೇ ಗ್ರಾಮವನ್ನು ಆಯ್ಕೆ ಮಾಡಿದ ಸಂದರ್ಭದಲ್ಲಿಯೂ ಸಹ ಪ.ಜಾತಿ ಮತ್ತು ಪ.ಪಂ ದವರು ವಾಸಿಸುವ ಕಾಲೋನಿಗಳನ್ನು ಸಂಪೂರ್ಣವಾಗಿ ಅಭಿವೃದ್ಧಿ ಪಡಿಸಲು ಕ್ರಮ ಕೈಗೊಳ್ಳುವುದು.

6. ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರಿಗೆ ಮೀಸಲಾದ ಅನುದಾನವನ್ನು ಯಾವುದೇ ಕಾರಣಕ್ಕೂ ಮಾರ್ಗಪಲ್ಲಟ ಮಾಡುವಂತಿಲ್ಲ ಹಾಗೂ ಅನುಮೋದಿತ ಯೋಜನೆಯಂತೆ ಪ.ಜಾತಿ/ ಪ.ಪಂ ದ ಕಾಲೋನಿಗಳ ಅಭಿವೃದ್ಧಿ ಕಾರ್ಯಕ್ರಮಗಳನ್ನು ಕೈಗೊಳ್ಳುವುದು.

7. ಗ್ರಾಮ ಪಂಚಾಯತಿಗಳು ಗ್ರಾಮಾಭಿವೃದ್ಧಿ ಯೋಜನೆಯನ್ನು ತಯಾರಿಸುವಾಗ ಮುಖ್ಯ ಮಂತ್ರಿಗಳ 21 ಅಂಶಗಳ ಕಾರ್ಯಕ್ರಮಗಳನ್ನು ಕಡ್ಡಾಯವಾಗಿ ಮಾರ್ಗಸೂಚಿಯಲ್ಲಿ ಸೂಚಿಸಿರುವ ಪರಿಮಾಣಗಳಂತೆ ಅಳವಡಿಸುವುದು ಹಾಗೂ ಕಾರ್ಯಕ್ರಮವಾರು ಭರಿಸುವ ಅನುದಾನವನ್ನು ಸಹ ಪ್ರತ್ಯೇಕವಾಗಿ ನಮೂದಿಸುವುದು.

8. ಮುಖ್ಯಮಂತ್ರಿ ಗ್ರಾಮವಿಕಾಸ ಯೋಜನೆಯಡಿ ಆಯ್ಕೆಯಾದ ಗ್ರಾಮಗಳಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳನ್ನು ಮಾರ್ಗಸೂಚಿಯಲ್ಲಿರುವ ಅನುಷ್ಠಾನದ ವೇಳಾಪಟ್ಟಿಯಂತೆ ಅನುಷ್ಠಾನಕ್ಕೆ ತಂದು ಎಲ್ಲಾ ಅಭಿವೃದ್ಧಿ ಕಾರ್ಯಕ್ರಮಗಳನ್ನು ನಿಗದಿತ ಕಾಲವಾಧಿಯೊಳಗೆ ಮುಕ್ತಾಯಗೊಳಿಸಲು ಕ್ರಮ ಕೈಗೊಳ್ಳುವುದು.

9. ಶಾಸಕರ ಅಧ್ಯಕ್ಷತೆಯಲ್ಲಿ ರಚನೆಯಾದ ಮುಖ್ಯಮಂತ್ರಿ ಗ್ರಾಮ ವಿಕಾಸ ಯೋಜನೆಯ ಉಸ್ತುವಾರಿ ಸಭೆಯನ್ನು ಕಡ್ಡಾಯವಾಗಿ 2 ತಿಂಗಳಿಗೊಮ್ಮೆ ನಡೆಯುವಂತೆ ಕ್ರಮ ಕೈಗೊಳ್ಳುವುದು. ಪ್ರಗತಿಯನ್ನು ಪರಾಮರ್ಶಿಸಿ ಗ್ರಾಮದ ಅಭಿವೃದ್ಧಿಗೆ ಎಲ್ಲಾ ರೀತಿಯ ಸಲಹೆ, ಸೂಚನೆ, ಮಾರ್ಗದರ್ಶನಗಳನ್ನು ಪಡೆದು ಮತ್ತು ವಿವಿಧ ಯೋಜನೆಗಳಲ್ಲಿ ಲಭ್ಯವಾಗುವ ಅನುದಾನವನ್ನು ಒಗ್ಗೂಡಿಸಿ ಮುಖ್ಯಮಂತ್ರಿ ಗ್ರಾಮವಿಕಾಸ ಯೋಜನೆಯಡಿ ಆಯ್ಕೆಯಾದ ಗ್ರಾಮವನ್ನು ಸರ್ವತೋಮುಖವಾಗಿ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳುವುದು.

10. ಮುಖ್ಯಮಂತ್ರಿ ಗ್ರಾಮವಿಕಾಸ ಯೋಜನೆಯ ಅನುದಾನ ಹಾಗೂ ಒಗ್ಗೂಡಿಸಿದ ಕಾರ್ಯಕ್ರಮಗಳ ಅನುದಾನವನ್ನು ಪ್ರತ್ಯೇಕ ವಹಿಗಳಲ್ಲಿ (Separate Register) ನಿರ್ವಹಿಸುವುದು ಹಾಗೂ ಆಯಾ ಕಾರ್ಯಕ್ರಮಗಳ ಅನುದಾನವನ್ನು ಬಳಸುವಾಗ ಆಯಾ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸರ್ಕಾರವು ಹೊರಡಿಸಿದ ಆದೇಶ/ ಮಾರ್ಗಸೂಚಿ/ ಸುತ್ತೋಲೆಗಳನ್ವಯ ಅನುಷ್ಠಾನಕ್ಕೆ ತರುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಡಾ. ಬೂದನಹಳ್ಳಿ ನಾಗರಾಜ್)
ನಿರ್ದೇಶಕರು
ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು:

1. ಮಹಾ ಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾ ಲೇಖಪಾಲರು (ಆಡಿಟ್-1), ಕರ್ನಾಟಕ, ಬೆಂಗಳೂರು.
3. ಮಹಾ ಲೇಖಪಾಲರು (ಆಡಿಟ್-2), ಕರ್ನಾಟಕ, ಬೆಂಗಳೂರು.

4. ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿ, ಮುಖ್ಯಮಂತ್ರಿಗಳ ಕಾರ್ಯಾಲಯ, ವಿಧಾನಸೌಧ, ಬೆಂಗಳೂರು.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು, ಹಾವೇರಿ ಮತ್ತು ತುಮಕೂರು.
7. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ..ಅ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು. (ಪಂ.ರಾಜ್) ಗ್ರಾ..ಅ ಮತ್ತು ಪಂ.ರಾಜ್ ಇಲಾಖೆ, ಬೆಂಗಳೂರು.
12. ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು. ಹಾವೇರಿ ಮತ್ತು ತುಮಕೂರು.
13. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ. ಅ ಮತ್ತು ಪಂ.ರಾಜ್ ಇಲಾಖೆ. ಬೆಂಗಳೂರು.
14. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
15. ಉಪನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನೆ ಇಲಾಖೆ ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
16. ಜಿಲ್ಲಾ ಖಜಾನಾಧಿಕಾರಿಗಳು, ಹಾವೇರಿ ಮತ್ತು ತುಮಕೂರು.
17. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಬೆಂಗಳೂರು.
18. ವ್ಯವಸ್ಥಾಪಕ ನಿರ್ದೇಶಕರು, ಕೆಆರ್‌ಐಡಿಎಲ್, ಗ್ರಾಮೀಣಾಭಿವೃದ್ಧಿ ಭವನ, ಬೆಂಗಳೂರು.
19. ಮುಖ್ಯ ಲೆಕ್ಕಾಧಿಕಾರಿಗಳು ಜಿಲ್ಲಾ ಪಂಚಾಯತ್, ಹಾವೇರಿ ಮತ್ತು ತುಮಕೂರು.
20. ಮುಖ್ಯ ಯೋಜನಾಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾವೇರಿ ಮತ್ತು ತುಮಕೂರು.
21. ಮುಖ್ಯಸ್ಥರು, ಗಣಕಕೋಶ/ ವೆಬ್‌ಸೈಟ್/ ಮಾಹಿತಿ ಕೇಂದ್ರ (10 ಪ್ರತಿಗಳು) ಗ್ರಾ.ಮತ್ತು ಪಂ.ರಾಜ್ ಇಲಾಖೆ ಬೆಂಗಳೂರು.
22. ಸಂಪಾದಕರು, ಕರ್ನಾಟಕ ವಿಕಾಸ,
23. ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ: 21 :ಗ್ರಾವಿಯೋ:2017, ಬೆಂಗಳೂರು,
ದಿನಾಂಕ: 31.08.2017.

(ಹಾವೇರಿ ಮತ್ತು ತುಮಕೂರು)

(ರೂ.ಲಕ್ಷಗಳಲ್ಲಿ)

| ಕ್ರ. ಸಂ | ಜಿಲ್ಲೆ | ವಿಧಾನ ಸಭಾ ಕ್ಷೇತ್ರ | ಗ್ರಾಮಗಳ ಹೆಸರು | ಪ. ಜಾತಿ | ಪ.ಪಂ | ಒಟ್ಟು ಜನಸಂಖ್ಯೆ | ಗ್ರಾಮವಾರು ನಿಗಧಿಪಡಿಸಿದ ಅನುದಾನ |
|---|---|---|---|---|---|---|---|
| 1 | ಹಾವೇರಿ | ಹಿರೇಕೇರೂರು | ಅರಳಿಕಟ್ಟೆ | 278 | 427 | 2034 | 100.00 |
| | | | ಯಡಗೋಡ | 140 | 38 | 1306 | 100.00 |
| | | | ನೂಲಗೇರಿ | 481 | 56 | 1553 | 100.00 |
| | | | ತಡಕನಹಳ್ಳಿ | 341 | 136 | 1417 | 100.00 |
| | | ಬ್ಯಾಡಗಿ | ಅತ್ತಿಕಟ್ಟಿ | 62 | 202 | 1233 | 100.00 |
| | | | ಮತ್ತೂರು | 74 | 391 | 2455 | 100.00 |
| | | | ನಾಗನೂರು | 68 | 204 | 2100 | 100.00 |
| | | | ಕುರುಬಗೊಂಡ | 1175 | 411 | 4052 | 100.00 |
| | | | ಕಜ್ಜರಿ | 986 | 976 | 4702 | 100.00 |
| | | | ಹೊನ್ನತ್ತಿ (ಹೊಸ ಹೊನ್ನತ್ತಿ) | 501 | 42 | 2916 | 100.00 |
| 2 | ತುಮಕೂರು | ಶ್ರೀ ರಮೇಶ್ ಬಾಬು, ವಿಧಾನ ಪರಿಷತ್ ಸದಸ್ಯರು (ಶಿಕ್ಷಕರ ಕ್ಷೇತ್ರ) | ಸಾಲ್ಕಟ್ಟೆ | 753 | 92 | 1644 | 100.00 |

ಡಾ. ಬೂವನಹಳ್ಳಿ ನಾಗರಾಜ್
ನಿರ್ದೇಶಕರು (ಸುಗ್ರಾಯೋ) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ